ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1281 (1480)
ಮಾನ್ಯ ಸದಸ್ಯರ ಹೆಸರು	ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	10/03/2022
ಉತ್ತರಿಸುವ ಸಚಿವರು	ಮಾನ್ಯ ಕಾರ್ಮಿಕ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಕೋವಿಡ್ ಸಮಯದಲ್ಲಿ ಆಹಾರ ಕಿಟ್ ವಿತರಿಸುವಲ್ಲಿ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯವತಿಯಿಂದ ಕೊವಿಡ್-19ರ ಸಂದರ್ಭದಲ್ಲಿ ಸಂಕಷ್ಟಕ್ಕೊಳಗಾದ ನೋದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅಸಂಘಟಿತ ವಲಯದ ಕಾರ್ಮಿಕರಿಗೆ ಆಹಾರ ಸಾಮಾಗ್ರಿ ಕಿಟ್‌ಗಳನ್ನು ಆದ್ಯತೆ ಮೇರೆಗೆ ವಿತರಿಸಲಾಗಿದ್ದು, ಯಾವುದೇ ತಾರತಮ್ಯ ಮಾಡಿರುವುದಿಲ್ಲ.
ಆ)	ಎಷ್ಟು ಜನ ಕಾರ್ಮಿಕರಿಗೆ ಆಹಾರ ಕಿಟ್ ವಿತರಣೆ ಮಾಡಲಾಗಿದೆ;	ಕೋವಿಡ್-19ರ ಮೊದಲನೇ ಅಲೆ ಸಂದರ್ಭದಲ್ಲಿ ಒಟ್ಟು 7.15 ಲಕ್ಷ ಆಹಾರ ಸಾಮಾಗ್ರಿ ಕಿಟ್‌ಗಳನ್ನು ಮತ್ತು ಎರಡನೇ ಅಲೆ ಸಂದರ್ಭದಲ್ಲಿ ಒಟ್ಟು 23.42 ಲಕ್ಷ ಆಹಾರ ಸಾಮಾಗ್ರಿ ಕಿಟ್‌ಗಳನ್ನು ವಿತರಿಸಲಾಗಿರುತ್ತದೆ. ಕೋವಿಡ್-19ರ ಎರಡನೇ ಅಲೆ ಸಂದರ್ಭದಲ್ಲಿ ಅಸಂಘಟಿತ ವಲಯದ ಒಟ್ಟು 3.82 ಲಕ್ಷ ಕಾರ್ಮಿಕರಿಗೆ ಆಹಾರ ಸಾಮಾಗ್ರಿ ಕಿಟ್‌ಗಳನ್ನು ವಿತರಿಸಲಾಗಿದೆ.
ಇ)	ಕಿಟ್‌ಗಳನ್ನು ವಿತರಣೆ ಮಾಡಲು ಕಾರ್ಮಿಕರನ್ನು ಯಾವ ಮಾನದಂಡದ ಮೇಲೆ ಗುರುತಿಸಲಾಗಿದೆ;	ಕೊವಿಡ್-19ರ ಸಂದರ್ಭದಲ್ಲಿ ಸಂಕಷ್ಟಕ್ಕೊಳಗಾದ ನೋದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ವಲಸೆ ಕಾರ್ಮಿಕರಿಗೆ ಆಹಾರ ಸಮಾಗ್ರಿ ಕಿಟ್‌ಗಳನ್ನು ಆದ್ಯತೆ ಮೇರೆಗೆ ವಿತರಿಸಲಾಗಿರುತ್ತದೆ.
ಈ)	ಎಲ್ಲಾ ಕಾರ್ಮಿಕರಿಗೆ ಆಹಾರ ಕಿಟ್‌ಗಳು ತಲುಪಿದೆಯೇ?	

ಕಾಇ 154 ಎಲ್‌ಇಟ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು